# ಎನ್‌ಇಪಿಯಿಂದ ವ್ಯಕ್ತಿತ್ವದ ಸರ್ವಾಂಗೀಣ ಉನ್ನತಿ: ಸಚಿವ ಧರ್ಮೇಂದ್ರ ಪ್ರಧಾನ್




ಎನ್‌ಐಟಿಕೆ ಘಟಿಕೋತ್ಸವದಲ್ಲಿ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಪದವಿ ಪ್ರದಾನ ಮಾಡಿದರು.

ಮಂಗಳೂರು, ಅ. 15: ಪ್ರಾಚೀನ ಮತ್ತು ಆಧುನಿಕತೆ ಸಮ್ಮಿಳಿತವಾಗಿರುವ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ವ್ಯಕ್ತಿಯ ಸರ್ವಾಂಗೀಣ ಉನ್ನತಿಯ ಆಶಯವನ್ನು ಹೊಂದಿದೆ ಎಂದು ಕೇಂದ್ರ ಶಿಕ್ಷಣ, ಉದ್ಯಮಶೀಲತೆ ಮತ್ತು ಕೌಶಲಾಭಿವೃದ್ಧಿ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದರು.

ಸುರತ್ಕಲ್ ರಾಷ್ಟ್ರೀಯ ತಾಂತ್ರಿಕ ವಿದ್ಯಾಲಯ (ಎನ್‌ಐಟಿಕೆ)ದ 20ನೇ ವಾರ್ಷಿಕ ಘಟಿಕೋತ್ಸವದಲ್ಲಿ ಅವರು ಮಾತನಾಡಿದರು. ಎನ್‌ಇಪಿ 21ನೇ ಶತಮಾನದ ಸೈದ್ಧಾಂತಿಕ ದಾಖಲೆಯಾಗಿದೆ. ಎಲ್ಲ ರಾಜ್ಯಗಳಲ್ಲೂ ಇದು ಉತ್ತಮ ರೀತಿಯಲ್ಲಿ ಅನುಷ್ಠಾನವಾಗುತ್ತಿದೆ ಎಂದರು.

**ಹೈಡ್ರೋಜನ್ ಭವಿಷ್ಯದ ಇಂಧನ**

ಭವಿಷ್ಯದಲ್ಲಿ ಹೈಡ್ರೋಜನ್ ಸುಸ್ಥಿರ ಇಂಧನ ಮೂಲವಾಗಲಿದೆ. ಉತ್ತಮ ಮಾರುಕಟ್ಟೆಯೂ ಇದೆ. ಉತ್ಪಾದನೆಯಿಂದ ವಿತರಣೆ ವರೆಗೆ ಬಹಳಷ್ಟು ಅವಕಾಶಗಳಿವೆ. ಎನ್‌ಐಟಿಕೆಯಂತಹ ಸಂಸ್ಥೆಗಳು ಈ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿರುವುದು ಸಂತಸದ ವಿಚಾರ. ಎನ್‌ಐಟಿಕೆ ಈಗಾಗಲೇ ಆಹಾರ ತ್ಯಾಜ್ಯ ಬಳಸಿ 100 ಕಿಲೋ ಬಯೋಗ್ಯಾಸ್ ಉತ್ಪಾದಿಸುತ್ತಿದೆ. ಇದನ್ನು ಸರ್ವಸಜ್ಜಿತ ಹೈಡ್ರೋಜನ್ ಇಂಧನ ಸ್ಥಾವರವಾಗಿ ಅಭಿವೃದ್ಧಿಪಡಿಸಲು ವಿಪುಲ ಅವಕಾಶ ಹೊಂದಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಜೈ ಅನುಸಂಧಾನ್ ಕರೆಯನ್ನು ನೀಡಿದ್ದರು. ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಪಟ್ಟಿಯಲ್ಲಿ ಸೇರಿಸುವುದು ಗುರಿಯಾಗಿದೆ. ಕೃತಕ ಬುದ್ಧಿಮತ್ತೆ, ತಂತ್ರಜ್ಞಾನ ಕಲಿಕೆ, ದತ್ತಾಂಶ ವಿಶ್ಲೇಷಣೆ, ಎಲೆಕ್ಟ್ರಾನಿಕ್ಸ್, ಜೀನೋಮ್ ಎಡಿಟಿಂಗ್, 3ಡಿ ಪ್ರಿಂಟಿಂಗ್ ಮುಂತಾದ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆಯಾಗುತ್ತಿದೆ ಎಂದು ಸಚಿವ ಪ್ರಧಾನ್ ಹೇಳಿದರು. ಸಚಿವರು ಪದವಿ ಪ್ರದಾನ ಮಾಡಿದರು.

ಎನ್‌ಐಟಿಕೆ ಹಳೇ ವಿದ್ಯಾರ್ಥಿಗಳು ಹಾಗೂ ಬೆಂಗಳೂರಿನ ಸೋನಾ ಗ್ರೂಪ್ ಆಫ್ ಇಂಡಸ್ಟ್ರೀಸ್ ವ್ಯವಸ್ಥಾಪಕ ನಿರ್ದೇಶಕ ಹಾಗೂ ಯಜ್ಞನಾರಾಯಣ ಹಾಗೂ ಮೈರೆ ಟೆಕ್ನಿಮಾಂಟ್ ಇಟಲಿಯ ಭಾರತೀಯ ವಲಯ ಉಪಾಧ್ಯಕ್ಷ ಮಿಲಿಂದ್ ವಿ. ಬರಿಡೇ ಅತಿಥಿಯಾಗಿದ್ದರು.

ಅಧ್ಯಕ್ಷತೆ ವಹಿಸಿದ್ದ ಎನ್‌ಐಟಿಕೆ ನಿರ್ದೇಶಕ ಪ್ರೊ| ಪ್ರಸಾದ್ ಕೃಷ್ಣ ಸ್ವಾಗತಿಸಿ ಸಂಸ್ಥೆಯ ಸಾಧನೆಗಳ ಬಗ್ಗೆ ವಿವರಿಸಿದರು. ಸಂಸದ ನಳಿನ್ ಕುಮಾರ್ ಕಟೀಲು, ಶಾಸಕರಾದ ಡಾ| ಭರತ್ ಶೆಟ್ಟಿ, ವೈ.ಎ. ನಾರಾಯಣ ಸ್ವಾಮಿ, ಕುಲಸಚಿವ ಪ್ರೊ| ರವೀಂದ್ರನಾಥ್ ಉಪಸ್ಥಿತರಿದ್ದರು.

## 1,787 ವಿದ್ಯಾರ್ಥಿಗಳಿಗೆ ಪದವಿ

ಘಟಿಕೋತ್ಸವದಲ್ಲಿ 126 ಮಂದಿ ಪಿಎಚ್‌ಡಿ, 817 ಮಂದಿ ಪಿಜಿ, 844 ಮಂದಿ ಬಿಟೆಕ್ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 1,787 ವಿದ್ಯಾರ್ಥಿಗಳು ಪದವಿ ಪಡೆದಿದ್ದಾರೆ. 249 ಬಿಟೆಕ್ ವಿದ್ಯಾರ್ಥಿಗಳಿಗೆ ಪದವಿ ಜತೆ ಇತರ ವಿಭಾಗಗಳಲ್ಲಿ ಮೈನರ್ ಪದವಿಯನ್ನು ಪ್ರದಾನ ಮಾಡಲಾಯಿತು. ಪ್ರಥಮ ಬಾರಿಗೆ ಎನ್‌ಐಟಿಕೆ ಬಿಟೆಕ್ (ಆನರ್ಸ್) ಪದವಿಯನ್ನು ನೀಡಲಾಯಿತು. ಅತ್ಯಧಿಕ ಅಂಕ (ಸಿಜಿಪಿಎ) ಗಳಿಸಿದ 9 ಮಂದಿ ಬಿಟೆಕ್ ವಿದ್ಯಾರ್ಥಿಗಳು ಹಾಗೂ 30 ಪಿಜಿ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರದಾನ ಮಾಡಲಾಯಿತು.

Udayavani, Date: 16/10/22. p, no- 14